<u>ಕರ್ನಾಟಕ ಸರ್ಕಾರದ ನಡವಳಿಗಳು.</u>

ವಿಷಯ:-ಶ್ರೀ ಟಿ.ಬಿ. ಹನುಮಂತಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ. ಪಾವಗಡ, ಮತ್ತು ಇತರರ ವಿರುದ್ಧದ ಇಲಾಖಾ ವಿಚಾರಣೆ ಬಗ್ಗೆ.

ಓದಲಾಗಿದೆ:1. ಮಾನ್ಯ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರೆಡಿ ಸಲ್ಲಿಸಿರುವ ವರದಿ ದಿ:28-06-2014.

2. ಅಪರ ನಿಬಂಧಕರು, ವಿಚಾರಣೆಗಳು-5 ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೆಂಟ್/ಲೋಕ್/ಬಿಡಿ-1025/2012/ಎಆರ್‌ಇ-5 ದಿನಾಂಕ:27-05-2015.

------

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಪತ್ರದ ಜೊತೆಗೆ ಅಪರ ನಿಬಂಧಕರು, ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಕಲಂ 12(3) ರ ವರದಿಯನ್ನು ಸರ್ಕಾರಕ್ಕೆ ಕಳುಹಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಕೈಗೊಂಡ ಕ್ರಮದ ಬಗ್ಗೆ ವರದಿ ಸಲ್ಲಿಸಲು ಕೋರಿರುತ್ತಾರೆ.

ತುಮಕೂರು ಜಿಲ್ಲೆಯ ಶಿಶು ಅಭಿವೃದ್ಧಿ ಯೋಜನೆಯ ಅಂಗನವಾಡಿ ಕೇಂದ್ರಗಳಿಗೆ ವಾಟರ್ ಫಿಲ್ಟರ್ ಖರೀದಿಯಲ್ಲಿನ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಮಹಿಳಾ ಮತ್ತು ಮಕ್ಕಳ ಇಲಾಖೆಯ ಆದೇಶ ಸಂಖ್ಯೆ: ಮಮಇ 612 ಎಸ್‌ಜೆಡಿ 2010 ದಿ:02-02-2012 ತಿದ್ದುಪಡಿ ಆದೇಶ ದಿನಾಂಕ:22-01-2013 ರನ್ವಯ ಲೋಕಾಯುಕ್ತ ಸಂಸ್ಥೆಯಿಂದ ತನಿಖೆಯನ್ನು ಕೈಗೊಂಡು ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಮಾನ್ಯ ಲೋಕಾಯುಕ್ತರ ದಿ.28-6-2014ರ ವರದಿಯನುಸಾರ 20 ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ /ಇಲಾಖಾ ವಿಚಾರಣೆ ನಡೆಸಲು ಕ್ರಮ ತೆಗೆದುಕೊಳ್ಳಲು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಲಾಗಿತ್ತು.

ಪ್ರಕರಣದಲ್ಲಿ ಭಾಗಿಯಾಗಿರುವ 20 ಅಧಿಕಾರಿಗಳಲ್ಲಿ ಈ ಕೆಳಕಂಡ ಅಧಿಕಾರಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ಅಧಿಕಾರಿಗಳಾಗಿರುತ್ತಾರೆ.

1. ಶ್ರೀ ಟಿ.ಬಿ. ಹನುಮಂತಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಾವಗಡ
2. ಶ್ರೀ ಡಿ. ಕೆ. ಲಿಂಗರಾಜು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಗುಬ್ಬಿ
3. ಶ್ರೀ ಗೋಪಾಲ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಕ್ಕನಾಯಕನಹಳ್ಳಿ
4. ಶ್ರೀ ನರಸಹನುಮಯ್ಯ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಧುಗಿರಿ
5. ಶ್ರೀ ಬಿ. ಜಿ. ರವೀಂದ್ರ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತಿಪಟೂರು.
6. ಶ್ರೀ ನಾಗೇಗೌಡ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕುಣಿಗಲ್

ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ ಅಪಾದಿತ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮೇಲಿನ ಕ್ರಮ ಸಂಖ್ಯೆ (1) ರಿಂದ (3) ರ ವರೆಗಿನ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರನ್ವಯ ಹಾಗೂ ಕ್ರಮ ಸಂಖ್ಯೆ (4) ರಿಂದ (6)

ರ ವರೆಗಿನ ನಿವೃತ್ತ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1958 ರ ನಿಯಮ 214 ರನ್ವಯ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಲೋಕಾಯುಕ್ತರಿಗೆ ವಹಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಆದೇಶ ಹೊರಡಿಸುವಂತೆ ಅಪರ ನಿಬಂಧಕರು, ವಿಚಾರಣೆಗಳು-5 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ದಿ:27-5-2015 ರ ಪತ್ರದಲ್ಲಿ ಕೋರಿರುತ್ತಾರೆ.

ಅಪರ ನಿಬಂಧಕರು, ವಿಚಾರಣೆಗಳು-5 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ದಿನಾಂಕ:27-5-2015 ರ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲಿನ ಕ್ರಮ ಸಂಖ್ಯೆ (1) ರಿಂದ (3) ರವರೆಗಿನ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ14(ಎ) ರನ್ವಯ ಇಲಾಖಾ ವಿಚಾರಣೆ ನಡೆಸಲು ಹಾಗೂ ಕ್ರಮ ಸಂಖ್ಯೆ (4) ರಿಂದ (6) ವರೆಗಿನ ನಿವೃತ್ತ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1958 ರ ನಿಯಮ 214 ರನ್ವಯ ಕ್ರಮ ವಹಿಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 250 ವಿಸೇಬಿ 2014 ಬೆಂಗಳೂರು ದಿನಾಂಕ: 14- 07- 2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಕ್ರಮ ಸಂಖ್ಯೆ: (1) ರಿಂದ (3) ರವರೆಗಿನ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರನ್ವಯ ಹಾಗೂ ಕ್ರ. ಸಂ. 4 ರಿಂದ 6 ವರೆಗಿನ ನಿವೃತ್ತ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1958 ರ ನಿಯಮ 214 ರನ್ವಯ ಶಿಸ್ತು ಕ್ರಮ ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ)ರನ್ವಯ ಮಾನ್ಯ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರಿಗೆ ವಹಿಸಿ ಆದೇಶಿಸಿದೆ.

1. ಶ್ರೀ ಟಿ.ಬಿ. ಹನುಮಂತಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಾವಗಡ
2. ಶ್ರೀ ಡಿ. ಕೆ. ಲಿಂಗರಾಜು, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಗುಬ್ಬಿ
3. ಶ್ರೀ ಗೋಪಾಲ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಕ್ಕನಾಯಕನಹಳ್ಳಿ
4. ಶ್ರೀ ನರಸಹನುಮಯ್ಯ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಧುಗಿರಿ
5. ಶ್ರೀ ಬಿ. ಜಿ. ರವೀಂದ್ರ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ತಿಪಟೂರು.
6. ಶ್ರೀ ನಾಗೇಗೌಡ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕುಣಿಗಲ್

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ.ಬಿ &ಸಿ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:-
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಅಪರ ನಿಬಂಧಕರು, ವಿಚಾರಣೆಗಳು-5 ಮಾನ್ಯ ಕರ್ನಾಟಕ ಲೋಕಾಯುಕ್ತ ರವರ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು.

**ಪ್ರತಿಗಳು ಮಾಹಿತಿಗಾಗಿ :**

3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.